**ದಿ: 08-01-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ವಾದಿ ಪರ ಶ್ರೀ ಬಿ.ಹೆಚ್.ಕೆ. ವಕೀಲರಿಂದ :**

ಈ ದಾವೆಯಲ್ಲಿ ನಾನು ವಾದಿಯಾಗಿದ್ದು ಇಂದು ನನ್ನ ಮೌಖಿಕ ಸಾಕ್ಷದ ಬದಲು ಈ ಮುಖ್ಯ ವಿಚಾರಣೆ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದ ಎಲ್ಲಾ ವಿಷಯಗಳು ಸರಿ ಮತ್ತು ನಿಜ ಇರುತ್ತವೆ. ಅವುಗಳನ್ನು ತಿಳಿದುಕೊಂಡು ನಾನು ಸಹಿ ಹಾಕಿರುತ್ತೇನೆ.

ಈ ಕೆಳಗಿನ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

1. ಭೋಗಿರಾಮನಗುಂಡ ಗ್ರಾಮದ ಜಮೀನಿನ ಸರ್ವೆ ನಂಬರ್ 12/*/ಆ, 35/1/*, 12/*/ಕ, 45/*/1, 48/1/*, 48/2/*, ಇವುಗಳ 06 ಕಂಪ್ಯೂಟರ್ ಪಹಣಿಗಳನ್ನು ಕ್ರಮವಾಗಿ ನಿ ಪಿ 1 ರಿಂದ 6 ಎಂದು ಗುರುತಿಸಲಾಯಿತು.
2. ಗ್ರಾಮ ಪಂಚಾಯಿತಿ ಸೋಮನಮರಡಿ ಇವರಿಗೆ ಕಂದಾಯ ಪಾವತಿಸಿದ 02 ರಸೀದಿಗಳನ್ನು ನಿ ಪಿ 7 ಮತ್ತು 8 ಎಂದು ಗುರುತಿಸಲಾಯಿತು.
3. ಕೈಬರಹದ 03 ಮುಟೇಶನ್‌ಗಳನ್ನು ಕ್ರಮವಾಗಿ ನಿ ಪಿ 9 ರಿಂದ 11 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ವಾದಿಯರ ವಕೀಲರ ಕೋರಿಕೆಯ ಮೇರೆಗೆ ಮುಖ್ಯ ವಿಚಾರಣೆಯನ್ನು ಮುಂದೂಡಲಾಯಿತು.

(ಸಾಕ್ಷಿಯು ನೀಡಿರುವ ಸಾಕ್ಷವನ್ನು ಯಥಾವತ್ತಾಗಿ ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ.ಸರಿ ಇದೆ.

ಸಹಿ**/-**

ಸಿವಿಲ್ ಜಡ್ಜ್ & ಜೆ.ಎಂ.ಎಫ್.ಸಿ.

ದೇವದುರ್ಗ